ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE: 19/11/20

# ಕೆಪಿಎಸ್‌ಸಿ ಅಧಿಕಾರ ಮೊಟಕು

## ಸರ್ಕಾರಿ ನೌಕರರ ವಿರುದ್ಧ ಕ್ರಮಕ್ಕೆ ಆಯೋಗದ ಅನುಮತಿ ಅಗತ್ಯ ■ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ

**ಬೆಂಗಳೂರು:** ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕೆಪಿಎಸ್‌ಸಿ ಅನುಮತಿ ಪಡೆಯುವುದನ್ನು ಬದಲಾಯಿಸಿ ಸರ್ಕಾರವೇ ಅಧಿಕಾರ ಪಡೆಯಲು ಸಂಪುಟ ತೀರ್ಮಾನಿಸಿದೆ. ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ, ಇನ್ನುಮುಂದೆ ಅಧಿಕಾರ ನಿರ್ಲಕ್ಷ್ಯ ಹಾಗೂ ಇತರೆ ಲೋಪಗಳಿಗೆ ಸಂಬಂಧಿಸಿದಂತೆ ಕೆಪಿಎಸ್‌ಸಿ ಜತೆ ಸಮಾಲೋಚನೆ ನಡೆಸದೆ ಅಧಿಕಾರಿಗಳ ವಿರುದ್ಧ ಸರ್ಕಾರವೇ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

**ಪ್ರಕ್ರಿಯೆ ತಡವಾಗುತ್ತಿತ್ತು:** ಕೆಪಿಎಸ್‌ಸಿಯಿಂದ ಆಯ್ಕೆಯಾದ ಅಧಿಕಾರಿಗಳ ವಿರುದ್ಧ ಕರ್ತವ್ಯ ನಿರ್ಲಕ್ಷ್ಯ ಸೇರಿ ವಿವಿಧ ಆರೋಪಗಳಡಿ ಕ್ರಮ ಕೈಗೊಳ್ಳಬೇಕಾದರೆ ಸಂಬಂಧಪಟ್ಟ ಇಲಾಖೆಯವರು ಕೆಪಿಎಸ್‌ಸಿ ಅನುಮತಿ ಪಡೆಯಬೇಕಾಗಿತ್ತು. ಇದರಿಂದ ಪ್ರಕ್ರಿಯೆ ತಡವಾಗುತ್ತಿತ್ತು. ಹೀಗಾಗಿ, ಸರ್ಕಾರವೇ ಇದೀಗ ಆ ಅಧಿಕಾರ ಇಟ್ಟುಕೊಳ್ಳುವ ಉದ್ದೇಶದಿಂದ ಸಂಪುಟದಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಹಲವು ಪ್ರಕರಣಗಳಲ್ಲಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ವಿಚಾರದಲ್ಲಿ ಕೆಪಿಎಸ್‌ಸಿ ಅನುಮತಿ ವಿಳಂಬವಾಗಿ ಸರ್ಕಾರ ಏನೂ ಮಾಡಲಾಗದ ಸ್ಥಿತಿ ನಿರ್ಮಾಣವಾಗಿತ್ತು.


ದಾವಣಗೆರೆ ಜಿಲ್ಲೆ ಹರಿಹರ ನಗರಸಭೆ ವ್ಯಾಪ್ತಿಗೆ ಗುತ್ತೂರು ಮತ್ತು ಬಂಕಾಪುರ ಗ್ರಾಮ ಪಂಚಾಯಿತಿ ಸೇರ್ಪಡೆ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಮನಬೆಟ್ಟು ಕಿನ್ನಿಗೋಳಿ ಕಟೀಲು ಗ್ರಾಪಂ ಸೇರಿಸಿ ಕಟೀಲು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸಲು ಸಂಪುಟ ತೀರ್ಮಾನ ಕೈಗೊಂಡಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರವು ಪ್ರವಾಹ ಪರಿಹಾರಕ್ಕಾಗಿ 577 ಕೋಟಿ ರೂ. ಬಿಡುಗಡೆ ಮಾಡಿದ್ದು ರಾಜ್ಯ ಸರ್ಕಾರವೂ ಅದಕ್ಕೆ ಹಣ ಸೇರಿಸಿ ಒಂದು ಸಾವಿರ ಕೋಟಿ ರೂ.ಗಳನ್ನು ಸಂಕಷ್ಟಕ್ಕೆ ಒಳಗಾದವರಿಗೆ ಪರಿಹಾರ ವಿತರಿಸಲಿದೆ ಎಂದು ತಿಳಿಸಿದರು.

2020-21ನೇ ಸಾಲಿಗೆ ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ 500 ಕೋಟಿ ರೂ., ಕರ್ನಾಟಕ ನೀರಾವರಿ ನಿಗಮಕ್ಕೆ 650 ಕೋಟಿ ರೂ., ಕಾವೇರಿ ನೀರಾವರಿ ನಿಗಮಕ್ಕೆ 250 ಕೋಟಿ ರೂ., ವಿಶ್ವೇಶ್ವರಯ್ಯ ಜಲ ನಿಗಮಕ್ಕೆ 250 ಕೋಟಿ ರೂ. ಸೇರಿ 1,650 ಕೋಟಿ ರೂ. ಸಾಲ ಪಡೆಯಲು ಸರ್ಕಾರ ಖಾತರಿ ನೀಡಲು ಸಂಪುಟ ಒಪ್ಪಿಗೆ ನೀಡಿದೆ ಎಂದು ತಿಳಿಸಿದರು.

ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿ ತಿದ್ದುಪಡಿಗೆ ಸಂಪುಟ ಒಪ್ಪಿಗೆ ನೀಡಿದೆ. ನಿಯಮಾವಳಿ ರಚನೆಯಾಗಿ ಬಹಳ ವರ್ಷಗಳಾಗಿದ್ದರೂ ಪರಿಷ್ಕರಣೆಯಾಗಿಲ್ಲ. ಕೃಷಿ ಆಯುಕ್ತರು ಹಾಗೂ ಜಲಾನಯನ ಅಭಿವೃದ್ಧಿ ಆಯುಕ್ತರ ಹುದ್ದೆ ಸೇರಿಸಲಾಗಿದೆ ಎಂದು ಹೇಳಿದರು.

ಬೆಳಗಾವಿ ನಗರದ ದಕ್ಷಿಣ ಮತ ಕ್ಷೇತ್ರದ ಅಭಿವೃದ್ಧಿಗೆ 28.5 ಕೋಟಿ ರೂ. ಯೋಜನೆ ಹಾಗೂ ಹೊಸಪೇಟೆಯಲ್ಲಿ ಹಳೇ ತರಕಾರಿ ಮಾರುಕಟ್ಟೆ ನಿರ್ಮಾಣಕ್ಕೆ 13.85 ಕೋಟಿ ರೂ. ಯೋಜನೆಗೂ ಸಂಪುಟ ಅನುಮೋದನೆ ನೀಡಿದೆ. ಎರಡೂ ಯೋಜನೆಗಳಿಗೆ ಆಯಾ ಸ್ಥಳೀಯ ಸಂಸ್ಥೆಗಳೇ ಹಣ ಭರಿಸಲಿವೆ ಎಂದು ತಿಳಿಸಿದರು.



### 21 ಸಾರ್ವತ್ರಿಕ ರಜೆ

2021 ನೇ ಸಾಲಿಗೆ ಸಾರ್ವತ್ರಿಕ ರಜೆ ಹಾಗೂ ಪರಿಮಿತ ರಜೆಗಳನ್ನು ಸಂಪುಟದಲ್ಲಿ ನಿರ್ಧರಿಸಲಾಗಿದ್ದು, 21 ಸಾರ್ವತ್ರಿಕ ರಜೆ ಹಾಗೂ 19 ನಿರ್ಬಂಧಿತ ರಜೆ ನಿಗದಿಪಡಿಸಲಾಗಿದೆ.

### ಮರಾಠ ಸಮುದಾಯ ನಿಗಮ ರಚನೆ

ಮರಾಠ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಮುಂದಾಗಿದ್ದ ರಾಜ್ಯ ಸರ್ಕಾರ ಇದೀಗ ಪ್ರಾಧಿಕಾರ ಕೈ ಬಿಟ್ಟು ಮರಾಠ ಸಮುದಾಯದ ನಿಗಮ ರಚಿಸಲು ತೀರ್ಮಾನಿಸಿದೆ. ಪ್ರಾಧಿಕಾರ ರಚಿಸಲು ಹೊಸ ಕಾಯ್ದೆ ರೂಪಿಸಬೇಕಾಗುತ್ತದೆ. ಹೀಗಾಗಿ, ನಿಗಮ ರಚಿಸಲು ಸಂಪುಟ ನಿರ್ಧರಿಸಿದೆ. ಇದಕ್ಕೆ ಯಾಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೋ ಗೊತ್ತಿಲ್ಲ, ಸಮುದಾಯದ ಅಭಿವೃದ್ಧಿ ಉದ್ದೇಶವಷ್ಟೇ ಎಂದು ಸಚಿವ ಮಾಧುಸ್ವಾಮಿ ತಿಳಿಸಿದರು. ಮರಾಠ ಅಭಿವೃದ್ಧಿ ಪ್ರಾಧಿಕಾರ ರಚನೆ ಕುರಿತ ಸರ್ಕಾರದ ತೀರ್ಮಾನಕ್ಕೆ ಕನ್ನಡ ಪರ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿ ಬಂದ್‌ಗೆ ಕರೆ ನೀಡಿದ ಹಿನ್ನೆಲೆಯಲ್ಲಿ 'ಪ್ರಾಧಿಕಾರ' ತೀರ್ಮಾನ ಕೈಬಿಟ್ಟು 'ಮರಾಠ ಸಮುದಾಯ ನಿಗಮ' ಸ್ಥಾಪನೆ ನಿರ್ಧಾರ ಕೈಗೊಳ್ಳಲಾಗಿದೆ ಎನ್ನಲಾಗಿದೆ.

### ಡಿ.7 ರಿಂದ 15ರ ತನಕ ಅಧಿವೇಶನ

ವಿಧಾನಮಂಡಲದ ಚಳಿಗಾಲದ ಅಧಿವೇಶನ ಡಿ.7 ರಿಂದ 15 ರವರೆಗೆ ನಡೆಸಲು ಸಚಿವ



ಸಂಪುಟ ತೀರ್ಮಾನ ಕೈಗೊಂಡಿದೆ. ಕೊರೊನಾ ಹಿನ್ನೆಲೆಯಲ್ಲಿ ಕಷ್ಟವಾದರೂ ಅಧಿವೇಶನ ನಡೆಸುವುದನ್ನು ಬಿಡಬಾರದು ಎಂದು ಸಂಪುಟದಲ್ಲಿ ಚರ್ಚೆಯಾಗಿ ಡಿ.7ರಿಂದ 15 ರವರೆಗೆ ಬೆಂಗಳೂರಿನಲ್ಲಿಯೇ ನಡೆಸಲು ತೀರ್ಮಾನಿಸಲಾಗಿದೆ ಎಂದು ಸಚಿವ ಮಾಧುಸ್ವಾಮಿ ತಿಳಿಸಿದರು.

## ಮೀಸಲು ಹೆಚ್ಚಳಕ್ಕಾಗಿ ಸಂಪುಟ ಉಪಸಮಿತಿ

**ಬೆಂಗಳೂರು:** ಪ.ಜಾತಿ ಮತ್ತು ಪ.ಪಂಗಡದವರ ಮೀಸಲಾತಿ ಪ್ರಮಾಣ ಹೆಚ್ಚಳ ಕೂಗಿಗೆ ರಾಜ್ಯ ಸರ್ಕಾರ ಸ್ಪಂದಿಸಿದೆ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಬೇಕೆಂಬ ಈ ಪಂಗಡದವರ ಬೇಡಿಕೆ ಪರಿಶೀಲಿಸಿ ವರದಿ ನೀಡುವ ಸಲುವಾಗಿ ಸಂಪುಟ ಉಪ ಸಮಿತಿ ರಚನೆಗೆ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ. ಉಪ ಸಮಿತಿಗೆ ಸದಸ್ಯರ ಆಯ್ಕೆ ಅಧಿಕಾರವನ್ನು ಮುಖ್ಯಮಂತ್ರಿಗಳಿಗೇ ನೀಡಲಾಗಿದೆ. ಸಂಪುಟ ಸಭೆಯ ನಂತರ ಮಾಹಿತಿ ನೀಡಿದ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ಪ.ಜಾ., ಪಂಗಡಗಳ ಮೀಸಲಾತಿ ಹೆಚ್ಚಳ ಸಂಬಂಧ ನ್ಯಾ.ನಾಗಮೋಹನ್‌ದಾಸ್ ವರದಿ ನೀಡಿದ್ದಾರೆ. ಈ ಕುರಿತು ಸಾಧಕ-ಬಾಧಕ ಕುರಿತು ಅಧ್ಯಯನ ನಡೆಸಲು ಸಂಪುಟ ಉಪ ಸಮಿತಿ ರಚನೆಗೆ ಸಂಪುಟ ತೀರ್ಮಾನಿಸಿದೆ ಎಂದರು. ಸಮಾಜ ಕಲ್ಯಾಣ ಸಚಿವ ಶ್ರೀರಾಮುಲು ಮಾತನಾಡಿ, ಪ.ಜಾತಿಗೆ ಹಾಲಿ ಇರುವ ಮೀಸಲಾತಿ ಪ್ರಮಾಣವನ್ನು ಶೇ.15 ರಿಂದ 17 ಹಾಗೂ ಪ.ಪಂಗಡಕ್ಕೆ ಶೇ.3 ರಿಂದ 7 ಹೆಚ್ಚಿಸಬೇಕು. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಬೇಕು ಎಂಬುದು ಬಹುದಿನಗಳ ಹೋರಾಟ. ಹೀಗಾಗಿ, ಸರ್ಕಾರ ಸಂಪುಟ ಉಪ ಸಮಿತಿ ರಚನೆ ತೀರ್ಮಾನ ಕೈಗೊಂಡಿದೆ ಎಂದು ತಿಳಿಸಿದರು.

### ವರದಿ ಬಹಿರಂಗಪಡಿಸಬೇಕು

ವರದಿಯನ್ನು ಸರ್ಕಾರ ಒಪ್ಪಬಹುದು ಇಲ್ಲವೇ ತಿರಸ್ಕರಿಸಬಹುದು.



ಕೆಲವು ಬದಲಾವಣೆಗಳನ್ನು ಬಯಸಬಹುದು. ಆದರೆ, ಆದಷ್ಟು ಬೇಗ ವರದಿಯನ್ನು ಬಹಿರಂಗಪಡಿಸಿದರೆ ಉತ್ತಮ. ಈ ಹಂತದಲ್ಲಿ ವರದಿಯಲ್ಲಿ ಏನೆಲ್ಲಾ ಶಿಫಾರಸು ಮಾಡಲಾಗಿದೆ ಎಂದು ಬಹಿರಂಗಪಡಿಸುವುದಿಲ್ಲ, ಅದು ಸರ್ಕಾರಕ್ಕೆ ಸಂಬಂಧಪಟ್ಟ ವಿಚಾರ ಎಂದು ನಿವೃತ್ತ ನ್ಯಾ. ನಾಗಮೋಹನ್‌ದಾಸ್ ಹೇಳಿದ್ದಾರೆ.